ಬಿ.ಎಂ.ಆರ್.ಡಿ.ಎ. ಪ್ರಾಧಿಕಾರದ ಕಾರ್ಯವೈಖರಿ

777(871) ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿ.ಎಂ.ಆರ್.ಡಿ.ಎ. ಪ್ರಾಧಿಕಾರವು ನೆಲಮಂಗಲ ತಾಲ್ಲೂಕಿನ ಕಸಬಾ ಹೋಬಳಿಯ ಕೆಲವು ಪ್ರದೇಶಗಳನ್ನು ಅನಾವಶ್ಯಕವಾಗಿ ಸೂಕ್ಷ್ಮ ಪ್ರದೇಶ ಎಂದು ಗುರುತಿಸಿ ಘೋಷಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸಿದ್ದ ಉಡುಪಿನ (ಗಾರ್ಮೆಂಟ್ಸ್) ಕೈಗಾರಿಕಾ ಸ್ಥಾಪಿಸಲು ಪರವಾನಿಗೆ ನೀಡದಿರಲು ಕಾರಣವೇನು; ಸಿದ್ದ ಉಡುಪಿನ ಕಾರ್ಖಾನೆ ಸ್ಥಾಪಿಸಿರುವುದರಿಂದ ಪರಿಸರ ಮಾಲಿನ್ಯ ಉಂಟಾಗುವುದೇ; ಹಾಗಿದ್ದಲ್ಲಿ ನಿದ್ದ ಉಡುಪಿನ ಕಾರ್ಖಾನೆ ಸ್ಥಾಪಿಸಲು ಸರ್ಕಾರ ಅನುಮತಿ ನೀಡಲು ಕ್ರಮ ಕೈಗೊಳ್ಳುವುದೇ?

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

ಅ) ಬಂದಿದೆ

ಆ) ಈ ಪ್ರದೇಶದಲ್ಲಿ ಉಡುಪುಗಳ ತಯಾರಿಕೆ ಘಟಕ ಸ್ಥಾಪಿಸುವ ಸಂಬಂಧ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇವರು ಸದರಿ ಕಾರ್ಖಾನೆಯ ಸ್ಥಾಪನೆಯಿಂದ ಜಲಾಶಯವು ಕಲುಷಿತಗೊಳ್ಳುವುದರಿಂದ ಪರಿಗಣಿಸಲು ಸಾಧ್ಯವಿಲ್ಲವೆಂದು ಅಭಿಪ್ರಾಯ ನೀಡಿರುತ್ತಾರೆ. ಕಾರ್ಯ ಯೋಜನೆಯನ್ನು ಅಂತಿಮ ಗೋಳಿಸಿದ ನಂತರ, ಉಡುಪುಗಳ ತಯಾರಿಕಾ ಘಟಕಗಳ ಸ್ಥಾಪನೆ ಬಗ್ಗೆ ಸರ್ಕಾರವು ಪರಿಶೀಲಿಸುವುದು.

ನಗರಸಭೆಯ ನಗರ ಪ್ರದೇಶದಲ್ಲಿ ಅಭಿವೃದ್ಧಿ ಶುಲ್ಕ ಪಾವತಿ ಮಾಡಿಸಿಕೊಳ್ಳಲು ಕಾನೂನು ತೊಡಕು ಇರುವುದು

779 (856) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಗರ ಪ್ರದೇಶಗಳಲ್ಲಿ ಅಭಿವೃದ್ಧಿ ತೆರಿಗೆ ವಸೂಲಿ ಮಾಡುವ ಬಗೆಗೆ ನಗರಸಭೆ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರಗಳ ನಡುವೆ ಜಿಜ್ಞಾಸೆ ಇದ್ದು ನಗರಸಭೆ ಅಭಿವೃದ್ಧಿ ಶುಲ್ಕ ವಸೂಲಿ ಮಾಡಲು ಕಾನೂನು ತೊಡಕು ಇರುವುದನ್ನು ಸರ್ಕಾರವು ಮನಗಂಡಿದೆಯೇ;

ಆ) ಹಾಗಿದ್ದಲ್ಲಿ ಈ ಕಾನೂನು ತೊಡಕನ್ನು ನಿವಾರಿಸಲು ಸರ್ಕಾರವು ಯಾವ ಕ್ರಮವನ್ನು ಕೈಗೊಂಡಿದೆ?

ಶ್ರೀ ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು) :

ಅ) ಹೌದು, ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳು ಅಧಿನಿಯಮ 1987ರ ಕಲಂ 76ರನ್ವಯ ನಗರಾಭಿವೃದ್ಧಿ ಪ್ರಾಧಿಕಾರಗಳನ್ನು ರಚಿಸಿರುವಂತಹ ಪ್ರದೇಶಗಳಲ್ಲಿ ನಗರಸಭೆಗಳಿಗೆ ಅಭಿವೃದ್ಧಿ ಶುಲ್ಕ ವಿಧಿಸುವ ಅಥವಾ ವಸೂಲಿ ಮಾಡುವ ಅಧಿಕಾರ ವಿರುವುದಿಲ್ಲ.